# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1081 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವದಿನಾಂಕ | : | 25/07/2024 |
| ಉತ್ತರಿಸುವ ಸಚಿವರು. | : | ಗೃಹ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 5 ವರ್ಷದ ಅವಧಿಯಲ್ಲಿ ಆನ್‌ಲೈನ್ ಮೂಲಕ ಉದ್ಯೋಗ ಕೊಡಿಸುವ ಹಾಗೂ ವಿವಿಧ ಆಮಿಷವೊಡ್ಡಿ ವಂಚನೆ ಮಾಡಿರುವ ಪ್ರಕರಣಗಳ ಸಂಖ್ಯೆಯೆಷ್ಟು ; | ಕಳೆದ 5 ವರ್ಷದ ಅವಧಿಯಲ್ಲಿ ಆನ್‌ಲೈನ್ ಮೂಲಕ ಉದ್ಯೋಗ ಕೊಡಿಸುವ ಹಾಗೂ ವಿವಿಧ ಆಮಿಷವೊಡ್ಡಿ ವಂಚನೆ ಮಾಡಿರುವ ಪ್ರಕರಣಗಳ ಸಂಖ್ಯೆ ಈ ಕೆಳಕಂಡಂತಿದೆ.<br><br>**ವರ್ಷ** — **ಆನ್‌ಲೈನ್ ಉದ್ಯೋಗ ವಂಚನೆ ಪ್ರಕರಣಗಳ ಸಂಖ್ಯೆ**<br>2020 — 394<br>2021 — 570<br>2022 — 977<br>2023 — 4470<br>10.07.2024 ವರೆಗೆ — 1820 |
| ಆ) | ಸೈಬರ್ ವಂಚನೆ ಪ್ರಕರಣಗಳು ಇತ್ತೀಚೆಗೆ ಹೆಚ್ಚಾಗಿ ನಡೆಯುತ್ತಿದ್ದು, ಈ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ; | **ಸೈಬರ್ ಅಪರಾಧಗಳ ಕುರಿತಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕುರಿತು ಕೈಗೊಂಡಿರುವ ಕ್ರಮಗಳು:**<br><br>❖ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>❖ ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸಆಪ್ ಹಾಗೂ ಟ್ವಿಟ್ಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ. ಸೈಬರ್ ಜಾಗೃತಿ ಬಗ್ಗೆ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ, ವಿದ್ಯಾರ್ಥಿಗಳಿಗೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>❖ ಸಾರ್ವಜನಿಕರಿಗೆ ಸಾಮಾಜಿಕ ಜಾಲತಾಣಗಳ ಮೂಲಕ ಸೈಬರ್ ವಂಚನೆಗಳ ಬಗ್ಗೆ ಅರಿವು ಮೂಡಿಸಿ, ಒ.ಟಿ.ಪಿ, ಲಿಂಕ್‌ಗಳು, ನಕಲಿ ವೆಬ್‌ಸೈಟ್‌ಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ |

<table>
<tr>
<td>ಇ)</td>
<td>ವಂಚನೆಗೊಳಗಾಗಿರುವವರು ಇದುವರೆಗೂ ಎಷ್ಟು ಹಣವನ್ನು ಕಳೆದು ಕೊಂಡಿರುತ್ತಾರೆ ಹಾಗೂ ಎಷ್ಟು ಸಂತ್ರಸ್ಥರಿಗೆ ಮರಳಿ ಹಣವನ್ನು ಹಿಂತಿರುಗಿಸಲಾಗಿದೆ;</td>
<td>ಉದ್ಯೋಗ ಕೊಡಿಸುವ ಆಮಿಷವೊಡ್ಡಿ ವಂಚನೆಗೊಳಗಾಗಿರುವವರು ಕಳೆದುಕೊಂಡಿರುವ ಹಣ ಹಾಗೂ ವಂಚನೆಗೊಳಪಟ್ಟ ಮೊತ್ತದಲ್ಲಿ ರಿಕವರಿಯಾದ ಮೊತ್ತದ ವಿವರಗಳು ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಆನ್‌ಲೈನ್ ಉದ್ಯೋಗ ವಂಚನೆ ಪ್ರಕರಣಗಳ ಸಂಖ್ಯೆ</th><th>ಆನ್‌ಲೈನ್ ಉದ್ಯೋಗ ವಂಚನೆಯ ಮೊತ್ತ (ರೂ.ಗಳಲ್ಲಿ)</th><th>ವಂಚನೆಗೊಳ ಪಟ್ಟ ಮೊತ್ತದಲ್ಲಿ ರಿಕವರಿಯಾದ ಮೊತ್ತ (ರೂ.ಗಳಲ್ಲಿ)</th></tr>
<tr><td>2020</td><td>394</td><td>56782816</td><td>8080306</td></tr>
<tr><td>2021</td><td>570</td><td>123151236</td><td>22109483</td></tr>
<tr><td>2022</td><td>977</td><td>231169310</td><td>39519682</td></tr>
<tr><td>2023</td><td>4470</td><td>3477042709</td><td>467364868</td></tr>
<tr><td>10.07.2024 ವರೆಗೆ</td><td>1820</td><td>1781890324</td><td>157135722</td></tr>
</table>
</td>
</tr>
<tr>
<td>ಈ)</td>
<td>ಇಂತಹ ಪ್ರಕರಣದಡಿಯಲ್ಲಿ ಇದುವರೆಗೂ ಎಷ್ಟು ಜನರನ್ನು ಬಂಧಿಸಲಾಗಿದೆ ಹಾಗೂ ಅವರಿಗೆ ನೀಡಲಾಗಿರುವ ಶಿಕ್ಷೆಯಾದರೂ ಏನು; ಅಪರಾಧ ನಡೆಸುತ್ತಿರುವವರು ನಮ್ಮ ದೇಶದವರೇ ಅಥವಾ ಹೊರದೇಶದವರೇ? (ಪೂರ್ಣ ವಿವರ ಒದಗಿಸುವುದು)</td>
<td>ಆನ್‌ಲೈನ್ ಮೂಲಕ ಉದ್ಯೋಗ ಕೊಡಿಸುವ ವಿವಿಧ ಆಮಿಷವೊಡ್ಡಿ ವಂಚನೆ ಮಾಡಿರುವ ಪ್ರಕರಣಗಳಲ್ಲಿ ಬಂಧಿಸಿರುವ ಆರೋಪಿಗಳ ಸಂಖ್ಯೆ ಮತ್ತು ಸದರಿ ಪ್ರಕರಣಗಳಲ್ಲಿ ಇತ್ಯರ್ಥಪಡಿಸಲಾಗಿರುವ ಪ್ರಕರಣಗಳ ಸಂಖ್ಯೆಯ ವಿವರಗಳು ಈ ಕೆಳಕಂಡಂತಿದೆ.
<table>
<tr><th>ವರ್ಷ</th><th>ಬಂಧಿಸಲ್ಪಟ್ಟವರ ಸಂಖ್ಯೆ</th><th>ದಾಖಲಾದ ಪ್ರಕರಣಗಳಲ್ಲಿ ಇತ್ಯರ್ಥಪಡಿಸಲಾದ ಪ್ರಕರಣಗಳ ಸಂಖ್ಯೆ</th></tr>
<tr><td>2020</td><td>7</td><td>232</td></tr>
<tr><td>2021</td><td>30</td><td>422</td></tr>
<tr><td>2022</td><td>38</td><td>630</td></tr>
<tr><td>2023</td><td>60</td><td>1036</td></tr>
<tr><td>10.07.2024 ವರೆಗೆ</td><td>13</td><td>68</td></tr>
</table>
ಆನ್‌ಲೈನ್ ವಂಚನೆಯ ಪ್ರಕರಣಗಳನ್ನು ಐಟಿ ಮತ್ತು ಐಪಿಸಿ ಕಾಯ್ದೆ ಅಡಿಯಲ್ಲಿ ದಾಖಲಿಸಿ. ತನಿಖೆ ಕೈಗೊಂಡು ಆರೋಪಿಗಳ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುತ್ತದೆ.</td>
</tr>
</table>

ಸಂಖ್ಯೆ: ಹೆಚ್‌ಡಿ 40 ಪಿಸಿಕ್ಯೂ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು